ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/11/ಇಸಿಎಸ್(2)/2016

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:23-02-2017

## ಜ್ಞಾಪನ

ವಿಷಯ: 2016 ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಡಿಪ್ಲೊಮಾ ಪರೀಕ್ಷೆಯ ಥಿಯರಿ ವಿಷಯಗಳ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಳನ್ನು ಪಡೆದ ನಂತರ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/11/ಇಸಿಎಸ್(2)/2016 ದಿ:11-01-2017
2) ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/11/ಇಸಿಎಸ್(2)/2016 ದಿ: 06-02-2017
3) ಸರ್ಕಾರಿ ಆದೇಶ ಸಂಖ್ಯೆ: ಇಡಿ/57/ಟಿಪಿಇ 2013 ಬೆಂಗಳೂರು ದಿ: 17-04-2015

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಈ ಕಛೇರಿ ಸುತ್ತೋಲೆಯಲ್ಲಿ 2016 ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಡಿಪ್ಲೊಮಾ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳು ಥಿಯರಿ ವಿಷಯಗಳ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಾಗಿ ಮತ್ತು ಮರುಮೌಲ್ಯಮಾಪನಕ್ಕಾಗಿ ನಿಗದಿತ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಲು ತಿಳಿಸಲಾಗಿತ್ತು.

ಉಲ್ಲೇಖ (2) ರ ಈ ಕಛೇರಿ ಸುತ್ತೋಲೆಯಲ್ಲಿ ಅಂತಹ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಳನ್ನು ಸಂಸ್ಥೆಗಳಿಗೆ ರವಾನಿಸಲಾಗಿದ್ದು, ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಫೋಟೋ ಪ್ರತಿ ನೀಡಿ ಸ್ವೀಕೃತಿ ಪತ್ರ ಪಡೆಯುವಂತೆ ತಿಳಿಸಲಾಗಿತ್ತು. ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಬಯಸುವ ವಿದ್ಯಾರ್ಥಿಗಳು ಫೋಟೋ ಪ್ರತಿ ತಲುಪಿದ 03 ದಿನಗಳೊಳಗೆ ಹತ್ತಿರದ ಸರ್ಕಾರಿ ಪಾಲಿಟೆಕ್ನಿಕ್/ ಖಜಾನೆಯಲ್ಲಿ ನಿಗದಿತ ಶುಲ್ಕ ಪಾವತಿಸಿ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಬಹುದೆಂದು ಮತ್ತು ಈಗಾಗಲೇ ಅರ್ಜಿ ಸಲ್ಲಿಸಿದ್ದಲ್ಲಿ ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ ಎಂದು ತಿಳಿಸಲಾಗಿತ್ತು.

ನಿಗದಿತ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಿದ್ದ ಯಾವುದೇ ವಿದ್ಯಾರ್ಥಿಗಳ ಫೋಟೋ ಪ್ರತಿ ಇದುವರೆಗೂ ತಲುಪಿಲ್ಲದ ಪಕ್ಷದಲ್ಲಿ ಸಂಬಂಧಪಟ್ಟ ಪ್ರಿನ್ಸಿಪಾಲರು ಅಂತಹ ವಿದ್ಯಾರ್ಥಿಗಳ ವಿವರಗಳನ್ನು ದಿನಾಂಕ: 27-02-2017 ರೊಳಗೆ ಮಂಡಳಿಗೆ ಸಲ್ಲಿಸಿ ಫೋಟೋ ಪ್ರತಿ ಪಡೆಯಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ಫೋಟೋ ಪ್ರತಿ ಪಡೆದು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳ ವಿವರಗಳನ್ನು ದಿನಾಂಕ:27-02-2017 ರೊಳಗೆ ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್‌ನಲ್ಲಿ ದಾಖಲಿಸಿ, ಅರ್ಜಿಗಳನ್ನು ಬಿಟಿಇ ಲಿಂಕ್ಸ್‌ನಿಂದ ಪಡೆದ ಸ್ವೀಕೃತಿ ಸ್ಲಿಪ್‌ನೊಂದಿಗೆ ಮಂಡಳಿಗೆ ತಲುಪಿಸಿ ಫಲಿತಾಂಶ ಪಡೆಯುವಂತೆ ಸೂಚಿಸಲಾಗಿದೆ. ದಿನಾಂಕ:27-02-2017ರ ನಂತರ ಫೋಟೋ ಪ್ರತಿ/ಮರುಮೌಲ್ಯಮಾಪನ ಫಲಿತಾಂಶಕ್ಕಾಗಿ ಕೋರಿಕೆ ಸಲ್ಲಿಸಿದಲ್ಲಿ ಪರಿಗಣಿಸಲಾಗುವುದಿಲ್ಲ ಹಾಗೂ ಉಲ್ಲೇಖ (3) ರ ಸರ್ಕಾರಿ ಆದೇಶದ ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:

ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿಗಾಗಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ

ಪ್ರತಿ:

1.ಇ – ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2.ಗಣಕ ಕೇಂದ್ರ – ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್ ನಲ್ಲಿ ಪ್ರಕಟಿಸಲು
3.ಕಾರ್ಯದರ್ಶಿಯವರ ಆಪ್ತ ಶಾಖೆ.